ಕರ್ನಾಟಕ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯ :

438 (5264) ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದಿಂದ ನೇರಸಾಲ ಹೊರತುಪಡಿಸಿ ಉಳಿದ ಯೋಜನೆಗಳ ಅರ್ಜಿಗಳನ್ನು ಬ್ಯಾಂಕುಗಳಿಗೆ ಕಳುಹಿಸುತ್ತಿರುವುದು ನಿಜವಲ್ಲವೇ;

ಆ) ಈ ಅರ್ಜಿ ಸಾಲ ಮಂಜೂರು ಮಾಡಲು ಬ್ಯಾಂಕುಗಳು ಅರ್ಜಿದಾರರಿಗೆ ಪದೇ ಪದೇ ಬರುವಂತೆ ಅಲೆದಾಡಿಸಿ ನಂತರ ಸಾಲ ಮಂಜೂರು ಮಾಡದಿರುವುದು ನಿಜವಲ್ಲವೇ;

ಇ) ಈ ರೀತಿಯ ಬ್ಯಾಂಕುಗಳಿಂದಾಗುವ ತೊಂದರೆಯನ್ನು ನಿವಾರಿಸಲು ಸರ್ಕಾರದ ಮುಂದಿರುವ ಕಾರ್ಯಕ್ರಮಗಳೇನು;

ಈ) ಈ ರೀತಿ ಬ್ಯಾಂಕುಗಳಿಗೆ ಕಳುಹಿಸಲಾಗುತ್ತಿರುವ ಸಾಲ ಸೌಲಭ್ಯಗಳ ಅರ್ಜಿಗಳ ಸ್ಥಿತಿಗತಿಗಳ ಪರಿಶೀಲನೆಗೆ ಜಿಲ್ಲಾಧಿಕಾರಿಗಳ ಹಾಗೂ ಶಾಸಕರ ಸಮಿತಿ ರಚಿಸಲು ಸರ್ಕಾರ ಕ್ರಮಕೈಗೊಳ್ಳುವುದೇ?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ನಿಜ, ಆದಾಗ್ಯೂ ವಾರ್ಷಿಕ ಕ್ರಿಯಾ ಯೋಜನೆಯಂತೆ ನಿಗದಿಪಡಿಸಿದ ಗುರಿಗನುಗುಣವಾಗಿ ಬ್ಯಾಂಕ್ ಶಾಖೆಗಳು ಸಾಲ ಮಂಜೂರು ಮಾಡುತ್ತೇವೆ.

ಇ) ಬ್ಯಾಂಕುಗಳಿಂದಾಗುವ ತೊಂದರೆಗಳೇನಾದರೂ ಇದ್ದಲ್ಲಿ ತಾಲ್ಲೂಕು ಮಟ್ಟದಲ್ಲಿ ಬ್ಲಾಕ್ ಲೆವೆಲ್ ಬ್ಯಾಂಕರ್ಸ್ ಕಮಿಟಿ, ಜಿಲ್ಲಾ ಮಟ್ಟದಲ್ಲಿ ಡಿಸ್ಟ್ರಿಕ್ಟ್ ಕನ್ಸಲ್‌ಟೇಟಿವ್ ಕಮಿಟಿ, ಡಿಸ್ಟ್ರಿಕ್ಟ್ ಲೆವೆಲ್ ರಿವ್ಯೂ, ಕಮಿಟಿ ಹಾಗೂ ರಾಜ್ಯಮಟ್ಟದಲ್ಲಿರುವ ಸ್ಟೇಟ್ ಲೆವೆಲ್ ಬ್ಯಾಂಕರ್ಸ್ ಕಮಿಟಿ ಸಭೆಗಳಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು.

ಈ) ಬ್ಯಾಂಕುಗಳು ಭಾರತೀಯ ರಿಜರ್ವ್ ಬ್ಯಾಂಕಿನ ಅಧಿಕಾರ ವ್ಯಾಪ್ತಿಗೆ ಒಳಪಟ್ಟಿರುವುದರಿಂದ ಇಂತಹ ಸಮಿತಿಯನ್ನು ರಚಿಸುವ ಕುರಿತು ಭಾರತ ಸರ್ಕಾರವು ಪರಿಶೀಲಿಸಬಹುದು.